ಕರ್ನಾಟಕ ಸರ್ಕಾರ
ಕಾಲೇಜು ಶಿಕ್ಷಣ ಇಲಾಖೆ
ಕನ್ನಡ ಕಾಯಕ ವರ್ಷ 2021-22

ಸಂಖ್ಯೆ:ಕಾಶಿಇ/ಶೈವಿ/10/ಸುತ್ತೋಲೆ/2021-22

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಉನ್ನತ ಶಿಕ್ಷಣ ಸೌಧ, ಶೇಷಾದ್ರಿ ರಸ್ತೆ,
ಬೆಂಗಳೂರು, ದಿನಾಂಕ:25.10.2021

# ಸುತ್ತೋಲೆ

**ವಿಷಯ :** 2021 ನೇ ಸಾಲಿನ ಕರ್ನಾಟಕ ರಾಜ್ಯೋತ್ಸವವನ್ನು ವಿಶೇಷವಾಗಿ ಆಚರಿಸುವ ಕುರಿತು.

**ಉಲ್ಲೇಖ :** ಮಾನ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಅರೆ ಸರ್ಕಾರಿ ಪತ್ರ ಸಂಖ್ಯೆ: ಮುಕಾ/877/2021, ದಿನಾಂಕ: 22.10.2021.

*****

ಕರ್ನಾಟಕ ರಾಜ್ಯೋತ್ಸವದ ಆಚರಣೆಯನ್ನು ಪ್ರತೀ ವರ್ಷ ನವೆಂಬರ್ 01 ನೇ ತಾರೀಖು ರಾಜ್ಯಾದ್ಯಾಂತ ಅಭಿಮಾನದಿಂದ ವಿಜೃಂಭಣೆಯಿಂದ ಆಚರಿಸಲಾಗುತ್ತಿದೆ. ಕನ್ನಡಿಗರಾದ ನಾವು ಅನೇಕ ಅನ್ಯಭಾಷೆಗಳ ಪ್ರಭಾವಕ್ಕೊಳಗಾಗಿ ಆ ಭಾಷೆಗಳ ಪದಗಳನ್ನು ಕನ್ನಡದಲ್ಲಿ ಬಳಸುವುದು ಸಹಜವಾಗಿದೆ. ಹಾಗೆಯೇ ಅನ್ಯಭಾಷೆಗಳ ಮಿಳಿತವೂ ಕನ್ನಡದಲ್ಲಿ ಬೆರೆತಂತೆ ಅನ್ಯ ಸಂಸ್ಕೃತಿಗಳು ನಮ್ಮಲ್ಲಿ ಹಾಸುಹೊಕ್ಕಾಗಿವೆ. ಕನ್ನಡಕ್ಕೆ ತನ್ನದೇ ಆದ ಸಂಪದ್ಭರಿತವಾದ ಸಾಂಸ್ಕೃತಿಕ ಮತ್ತು ಭಾಷಿಕ ಇತಿಹಾಸವಿದೆ. ಇದನ್ನು ಉಳಿಸಿ-ಬೆಳೆಸುವುದು ಎಲ್ಲ ಕನ್ನಡಿಗರ ಆದ್ಯ ಕರ್ತವ್ಯವಾಗಿದೆ.

ಈ ಹಿನ್ನಲೆಯಲ್ಲಿ ಇಲಾಖಾ ವ್ಯಾಪ್ತಿಯ ಎಲ್ಲಾ ಸರ್ಕಾರಿ/ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ/ಕೇಂದ್ರ ಕಛೇರಿ ಹಾಗೂ ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರ ಕಛೇರಿಗಳಲ್ಲಿ ದಿನಾಂಕ: 28.10.2021 ರಿಂದ 31.10.2021 ರವರೆಗೆ ಈ ಕೆಳಕಂಡ ರೀತಿಯಲ್ಲಿ ವಿಶೇಷವಾಗಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳುವ ಮೂಲಕ ಆಚರಿಸಬೇಕಾಗಿರುತ್ತದೆ.

- ದಿನಾಂಕ: 28.10.2021 ರಂದು ಬೆಳಿಗ್ಗೆ 11.00 ಗಂಟೆಗೆ ರಾಜ್ಯಾದ್ಯಾಂತ ಎಲ್ಲಾ ಕಾಲೇಜು/ಕಛೇರಿಗಳಲ್ಲಿ ಬೋಧಕ/ಬೋಧಕೇತರರು ಹಾಗೂ ವಿದ್ಯಾರ್ಥಿಗಳು ಕನ್ನಡದ ಶ್ರೇಷ್ಠತೆಯನ್ನು ಸಾರುವ ಡಾ. ಕುವೆಂಪುರವರ **"ಬಾರಿಸು ಕನ್ನಡ ಡಿಂಡಿಮವ"**, ಡಾ. ಕೆ ಎಸ್ ನಿಸಾರ್ ಅಹಮದ್ ರವರ **"ಜೋಗದ ಸಿರಿ ಬೆಳಕಿನಲ್ಲಿ"** ಹಾಗೂ ಚಲನಚಿತ್ರ ಸಂಗೀತ ನಿರ್ದೇಶಕರ ಹಂಸಲೇಖ ರವರ **" ಹುಟ್ಟಿದರೆ ಕನ್ನಡ ನಾಡಲ್ಲಿ ಹುಟ್ಟಬೇಕು"** ಈ ಮೂರು ಗೀತೆಗಳನ್ನು ಏಕಕಾಲದಲ್ಲಿ ಹೆಚ್ಚು ಹೆಚ್ಚು ಜನರು ಭಾಗವಹಿಸಿ ಹಾಡುವುದು.

  ಮುಂದುವರೆದು 29.10.2021 ರಿಂದ 31.10.2021 ರವರೆಗೆ ಈ ಕೆಳಕಂಡ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದು.

- ನಾಟಕ-ಸಂಗೀತ-ನೃತ್ಯ ಕಾರ್ಯಕ್ರಮಗಳು
- ಕನ್ನಡದಲ್ಲಿ ಮಾತು ಮತ್ತು ಬರವಣಿಗೆ
- ದೇಶೀಯ ಉಡುಪು, ತಿನಿಸುಗಳು ಬಳಕೆ ಕುರಿತು ಕಾರ್ಯಕ್ರಮ
- ಗಡಿಭಾಗದಲ್ಲಿ ಕನ್ನಡ ಜಾಗೃತಿ ಕಾರ್ಯಕ್ರಮ
- ಕನ್ನಡದಲ್ಲಿ ಮಾತನಾಡುವ ಸ್ಪರ್ಧೆ
- ಸಾಮೂಹಿಕ ಕನ್ನಡ ಗೀತಗಾಯನ.

- ನಾವು ಆಡುವ ಮಾತು ಕನ್ನಡದಲ್ಲಿಯೇ ಇರಬೇಕು ಎಂದು ಸಂಕಲ್ಪ ಮಾಡುವುದು. ಸಾಮಾಜಿಕ ಜಾಲತಾಣಗಳಲ್ಲಿ ಕನ್ನಡವನ್ನೇ ಬಳಸುವುದು. ಕನ್ನಡದಲ್ಲೇ ಬರೆಯುವುದು, ಸಹಿ ಮಾಡುವುದು ಹಾಗೂ ಸಿರಿಗನ್ನಡವನ್ನು ಬಳಸುವ ಅಭ್ಯಾಸ ಮಾಡುವುದು, ಕುಟುಂಬದ ಎಲ್ಲಾ ಸದಸ್ಯರು, ಮಕ್ಕಳು, ಸಂಬಂಧಿಕರು, ಅನಿವಾಸಿ ಕನ್ನಡಿಗರು, ಸುದ್ದಿಮಧ್ಯಮದವರು, ಎಲ್ಲಾ ಸರ್ಕಾರಿ ಅಧಿಕಾರಿ/ನೌಕರರು ಕನ್ನಡದಲ್ಲೇ ಮಾತನಾಡುವಂತೆ, ನಾವು ಬಳಸುವ ಚರವಾಣಿಯಲ್ಲಿ ಸಂದೇಶಗಳನ್ನು ಕನ್ನಡದಲ್ಲೇ ಕಳುಹಿಸುವಂತೆ, ಕನ್ನಡದಲ್ಲೇ ಸಹಿ ಮಾಡುವಂತೆ ಪ್ರೇರೇಪಿಸುವುದು.
- ಸುಮಾರು ನಾಲ್ಕೈದು ನಿಮಿಷಗಳ ಕಾಲ ನಿರರ್ಗಳವಾಗಿ ಅನ್ಯಭಾಷೆಯ ಪದಗಳನ್ನು ಬಳಸದೇ ಕೇವಲ ಕನ್ನಡಪದಗಳನ್ನೇ ಬಳಸಿ ಮಾತನಾಡುವ ಸ್ಪರ್ಧೆಯನ್ನು ಆಯೋಜಿಸುವುದು. ಕನ್ನಡ ನಾಡು, ನುಡಿ, ನೆಲ, ಜಲ, ಭಾಷೆ, ಸಂಸ್ಕೃತಿ, ಹಿರಿಮೆ ಕುರಿತಾದ ಒಂದು ವಿಷಯವನ್ನು ಆರಿಸಿಕೊಂಡು, ಮಾತನಾಡಬೇಕು. ಹೀಗೆ ಮಾತನಾಡಿದ ದೃಶ್ಯಚಿತ್ರಗಳನ್ನು ಸೆರೆಹಿಡಿದು, ಸಂಬಂಧಿಸಿದ ಪ್ರಾದೇಶಿಕ ಜಂಟಿ ನಿರ್ದೇಶಕರ ಮುಖಾಂತರ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರು ಇವರಿಗೆ ಸಲ್ಲಿಸಿ ಅದರ ಮಾಹಿತಿಯನ್ನು ಕೇಂದ್ರ ಕಛೇರಿಗೆ ಸಲ್ಲಿಸುವುದು.
- ಈ ಸಂಬಂಧ ವಿಶ್ವವಿದ್ಯಾಲಯ ಹಾಗೂ ಇತರೆ ಕಛೇರಿಗಳಲ್ಲಿ ನಡೆಸುವ ಕಾರ್ಯಕ್ರಮಗಳಲ್ಲಿ ವಿದ್ಯಾರ್ಥಿಗಳು ಹಾಗೂ ಬೋಧಕರು ಭಾಗವಹಿಸಲು ಕ್ರಮಕೈಗೊಳ್ಳುವುದು.

ಮೇಲ್ಕಂಡ ಎಲ್ಲ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ನಡೆಸಲು ಕ್ರಮಕೈಗೊಳ್ಳುವಂತೆ ಸೂಚಿಸಲಾಗಿದೆ.

(ಕರಡು ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ)

ಕಾಲೇಜು ಶಿಕ್ಷಣ ನಿರ್ದೇಶಕರು

ಇವರಿಗೆ

1. ಮಾಹಿತಿ ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು - ವೈಬ್‌ಸೈಟ್‌ನಲ್ಲಿ ಪ್ರಕಟಿಸಲು.
2. ಕಛೇರಿ ಪ್ರತಿ.